**ದಿವಾಣಿ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,**
**ಕೆ. ಆರ್. ಪುರಂ**

O.S. No 1670/2025
DW: 1

**ಸಾಕ್ಷಿಯನ್ನು ಪ್ರಮಾಣೀಕರಿಸಿದ ದಿನಾಂಕ : 04.03.2026**

**ಮುಂದುವರೆದ ಪಾಟೀ ಸವಾಲು : ವಾದಿ ಪರ ವಕೀಲರಾದ: ಶ್ರಿ . ಆರ್.ಪಿ ರವರಿಂದ**

16. ನಿಡಿ-1 ದಾಖಲಾತಿಯಂತೆ ಮುನಿಯಪ್ಪರವರು ತಮ್ಮ ಭಾಗದ ಸ್ವತ್ತನ್ನು ತನ್ನ ಮೂರು ಮಕ್ಕಳಿಗೆ ಹಂಚಿಕೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಿಡಿ-01 ರ ಸಂಪೂರ್ಣ ಮಾಹಿತಿ ನನಗೆ ಇರುತ್ತದೆ ಎಂದರೆ ಸರಿ. ನಿಡಿ-02 ಮತ್ತು ನಿಡಿ-03 ದಾಖಲಾತಿಗಳು ದಾವಾ ಸ್ವತ್ತಿಗೆ ಸಂಬಂಧಿಸಿರುವುದಿಲ್ಲ ಎಂದರೆ ಸರಿಯಲ್ಲ. ವಾದಪತ್ರದ ಸಂಪೂರ್ಣ ಮಾಹಿತಿ ನನಗೆ ಇರುತ್ತದೆ. ಸದರಿ ವಾದಪತ್ರದಲ್ಲಿ ದಾವಾಸ್ವತ್ತಿನಲ್ಲಿ ಜಾನುವಾರುಗಳ ಶೆಡ್ ಇರುತ್ತದೆ ಎಂದು ನಮೂದಿಸಿರುತ್ತಾರೆ ಎಂದರೆ ಸರಿ. ನಿಡಿ-05 ಛಾಯಾಚಿತ್ರಗಳಲ್ಲಿ ಕಾಣುವ ಜಾನುವಾರುಗಳ ಕೊಟ್ಟಿಗೆ ದಾವಾ ಸ್ವತ್ತಿನಲ್ಲಿ ಇರುತ್ತದೆ ಎಂದರೆ ಸಾಕ್ಷಿಯು ಅರ್ಧ ಭಾಗದಲ್ಲಿ ಇರುತ್ತದೆ ಎಂದು ನುಡಿಯುತ್ತಾರೆ. ಸದರಿ ಶೆಡ್ ಅನ್ನು ವಾದಿಗಳು ನಿರ್ಮಿಸಿರುತ್ತಾರೆ ಎಂದರೆ ಸರಿ. ವಾದಿಗಳು ವೆಂಕಟರಮಣಪ್ಪನಿಗೆ ದಾವಾ ಸ್ವತ್ತು ಹಂಚಿಕೆಯಾದ ದಿನದಿಂದ ಇಲ್ಲಿಯವರೆಗೆ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸಾಕ್ಷಿಯು ಅರ್ಧ ಭಾಗದಲ್ಲಿ ಮಾತ್ರ ಇರುತ್ತಾರೆ ಎಂದು ನುಡಿಯುತ್ತಾರೆ. ದಾವಾ ಸ್ವತ್ತಿನ ಅರ್ಧ ಭಾಗದಲ್ಲಿ ನಾವು ಸ್ವಾಧೀನದಲ್ಲಿ ಇರುತ್ತೇವೆ ಎಂದು ತೋರಿಸಲು ದಾಖಲಾತಿಗಳನ್ನು ಹಾಜರುಪಡಿಸಿರುತ್ತೇನೆ. ನಿಡಿ-04 ದಾವಾ ಸ್ವತ್ತಿಗೆ ಸಂಬಂಧಿಸಿರುವುದಿಲ್ಲ ಎಂದರೆ ಸರಿಯಲ್ಲ.

17. 01ನೇ ಪ್ರತಿವಾದಿ ನನ್ನ ದೊಡ್ಡಪ್ಪನಾಗಬೇಕು ಹಾಗೂ ಸದರಿಯವರಿಗೆ ಹಂಚಿಕೆಯಾದ ಜಮೀನನ್ನು 02ನೇ ಪ್ರತಿವಾದಿಗೆ ದಾನಪತ್ರದ ಮೂಲಕ ವರ್ಗಾವಣೆ ಮಾಡಿರುತ್ತಾರೆ ಎಂದರೆ ಸರಿ. ಸಾಕ್ಷಿಗೆ ಸದರಿ **ದಾನಪತ್ರದ ಪ್ರತಿಯನ್ನು** ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಒಪ್ಪಿದ್ದರಿಂದ ಅದನ್ನು **ನಿಪಿ -31 ಎಂದು** ಗುರುತಿಸಲಾಯಿತು. ನಿಪಿ-31 ರಲ್ಲಿ ನಮೂದಿಸಿರುವ ಸ್ವತ್ತು ಹಾಗೂ ನಿಡಿ-4 ರಲ್ಲಿ ನಮೂದಿಸಿರುವ ಸ್ವತ್ತು ಒಂದೇ ಎಂದರೆ ಸರಿ. ನಾವು ವಾದಿಗಳ ದಾವಾ ಸ್ವತ್ತಿನ ಸ್ವಾಧೀನಾನುಭಕ್ಕೆ ವಿನಾಕರಣ ತೊಂದರೆ ನೀಡಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಲಿಖಿತ ಹೇಳಿಕೆಯನ್ನು ಸಲ್ಲಿಸಿ, ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇರುವುದಿಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)**

**ಓ ಹೇ ಕೇ ಸರಿ ಇದೆ**

**ದಿವಾಣಿ ಮತ್ತು ಪ್ರಥಮ ದರ್ಜೆನ್ಯಾಯಿಕ**
**ದಂಡಾಧಿಕಾರಿಗಳ ನ್ಯಾಯಾಲಯ,**
**ಕೆ. ಆರ್. ಪುರಂ**